Paramedical Dialysis
Govt order.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಅಂಬಿಕ ಇನ್ಸ್ಟಿಟ್ಯೂಟ್ ಆಫ್ ಎಜುಕೇಷನ್ ಸೊಸೈಟಿ, ಬೆಂಗಳೂರು ಈ ಸಂಸ್ಥೆಗೆ ಪ್ಯಾರಾ ಮೆಡಿಕಲ್ ಕೋರ್ಸನ್ನು ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡುವ ಬಗ್ಗೆ.

******

ಓದಲಾಗಿದೆ:

ಸದಸ್ಯ ಕಾರ್ಯದರ್ಶಿ, ಪ್ಯಾರಾ ಮೆಡಿಕಲ್ ಬೋರ್ಡ್, ಬೆಂಗಳೂರು ಇವರ ಪತ್ರ ಸಂಖ್ಯೆ:ಪಿಎಂಬಿ/92/09-10, ದಿನಾಂಕ 27.09.2010.

ಪ್ರಸ್ತಾವನೆ:

ಮೇಲೆ ಓದಲಾದ ಪತ್ರದಲ್ಲಿ ಸದಸ್ಯ ಕಾರ್ಯದರ್ಶಿ, ಪ್ಯಾರಾ ಮೆಡಿಕಲ್ ಬೋರ್ಡ್, ಬೆಂಗಳೂರು ಇವರು ಅಂಬಿಕ ಇನ್ಸ್ಟಿಟ್ಯೂಟ್ ಆಫ್ ಎಜುಕೇಷನ್ ಸೊಸೈಟಿ, ಟಿ.ಬೇಗೂರು ಗ್ರಾಮ, ನೆಲಮಂಗಲ ತಾಲ್ಲೂಕು, ಬೆಂಗಳೂರು-562123 ಈ ಸಂಸ್ಥೆಯು 2010-11 ನೇ ಸಾಲಿನಿಂದ ಡಿಪ್ಲೊಮೋ ಇನ್ ಡಯಾಲಿಸಿಸ್ ಟೆಕ್ನಾಲಜಿ ಕೋರ್ಸನ್ನು 20 ಸೀಟುಗಳ ವಾರ್ಷಿಕ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿಗಾಗಿ ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ಅರ್ಜಿಯನ್ನು ಸಲ್ಲಿಸಿದ್ದು, ಪ್ಯಾರಾ ಮೆಡಿಕಲ್ ಬೋರ್ಡ್ ಈ ಸಂಸ್ಥೆಯಲ್ಲಿ ಸದರಿ ಕೋರ್ಸನ್ನು ಹೊಸದಾಗಿ ಪ್ರಾರಂಭಿಸಲು ಅಗತ್ಯವಿರುವ ಮೂಲಭೂತ ಸೌಕರ್ಯಗಳ ಬಗ್ಗೆ ಸ್ಥಳ ತಪಾಸಣೆ ನಡೆಸಿ, ವರದಿ ಸಲ್ಲಿಸಲು ತಪಾಸಣಾ ತಂಡವನ್ನು ರಚಿಸಲಾಗಿತ್ತೆಂದು, ಅದರಂತೆ, ತಪಾಸಣಾ ತಂಡವು ಸಂಸ್ಥೆಗೆ ಭೇಟಿ ನೀಡಿ, ಸ್ಥಳ ತಪಾಸಣೆ ನಡೆಸಿ, ಈ ಸಂಸ್ಥೆಯಲ್ಲಿ ಡಿಪ್ಲೊಮೋ ಇನ್ ಡಯಾಲಿಸಿಸ್ ಟೆಕ್ನಾಲಜಿ ಕೋರ್ಸನ್ನು 20 ಸೀಟುಗಳ ವಾರ್ಷಿಕ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡಲು ಶಿಫಾರಸ್ಸು ಮಾಡಿರುತ್ತದೆಂದು ತಿಳಿಸುತ್ತಾ, ಸದರಿ ಸಂಸ್ಥೆಗೆ 2010-11 ನೇ ಸಾಲಿನಿಂದ ಡಿಪ್ಲೊಮೋ ಇನ್ ಡಯಾಲಿಸಿಸ್ ಟೆಕ್ನಾಲಜಿ ಕೋರ್ಸನ್ನು 20 ಸೀಟುಗಳ ವಾರ್ಷಿಕ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡುವಂತೆ ಸರ್ಕಾರವನ್ನು ಕೋರಿರುತ್ತಾರೆ. ಮುಂದುವರೆದು, ತಪಾಸಣಾ ತಂಡವು ಸಲ್ಲಿಸಿರುವ ವರದಿಯನ್ನು ಹಾಗೂ ಈ ಬಗ್ಗೆ ಪ್ಯಾರಾ ಮೆಡಿಕಲ್ ಬೋರ್ಡ್‌ನಲ್ಲಿ ಜರುಗಿದ ಸಭೆಯ ನಡವಳಿಯ ಪ್ರತಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

19 2021

ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ, ಅಂಬಿಕ ಇನ್ಸ್ಟಿಟ್ಯೂಟ್ ಆಫ್ ಎಜುಕೇಷನ್ ಸೊಸೈಟಿ, ಟಿ.ಬೇಗೂರು ಗ್ರಾಮ, ನೆಲಮಂಗಲ ತಾಲ್ಲೂಕು, ಬೆಂಗಳೂರು-562123 ಈ ಸಂಸ್ಥೆಗೆ 2010-11 ನೇ ಸಾಲಿನಿಂದ ಡಿಪ್ಲೊಮೋ ಇನ್ ಡಯಾಲಿಸಿಸ್ ಟೆಕ್ನಾಲಜಿ ಕೋರ್ಸನ್ನು 20 ಸೀಟುಗಳ ವಾರ್ಷಿಕ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡಲು ಸರ್ಕಾರವು ತೀರ್ಮಾನಿಸಿ, ಈ ಆದೇಶವನ್ನು ಹೊರಡಿಸಿದೆ.

### ಸರ್ಕಾರದ ಆದೇಶ ಸಂಖ್ಯೆ: ಆಕುಕ 121 ಎಂಎಂಇ 2010, ಬೆಂಗಳೂರು, ದಿನಾಂಕ 08-09-2011

ಅಂಬಿಕ ಇನ್ಸ್ಟಿಟ್ಯೂಟ್ ಆಫ್ ಎಜುಕೇಷನ್ ಸೊಸೈಟಿ, ಟಿ.ಬೇಗೂರು ಗ್ರಾಮ, ನೆಲಮಂಗಲ ತಾಲ್ಲೂಕು, ಬೆಂಗಳೂರು-562123 ಈ ಸಂಸ್ಥೆಗೆ 2010-11 ನೇ ಸಾಲಿನಿಂದ ಡಿಪ್ಲೊಮೋ ಇನ್ ಡಯಾಲಿಸಿಸ್ ಟೆಕ್ನಾಲಜಿ ಕೋರ್ಸನ್ನು 20 (ಇಪ್ಪತ್ತು) ಸೀಟುಗಳ ವಾರ್ಷಿಕ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರಾತಿ ನೀಡಿ ಆದೇಶಿಸಿದೆ.

...2

## ಷರತ್ತುಗಳು

(1) ಯಾವುದೇ ಪ್ಯಾರಾ ಮೆಡಿಕಲ್ ಕೋರ್ಸುಗಳನ್ನು ಪ್ರಾರಂಭ ಮಾಡುವ ಮೊದಲು ಸಂಸ್ಥೆಯು ಸಂಯೋಜನಾ ಶುಲ್ಕದ ರೂಪದಲ್ಲಿ ಪ್ರತಿ ಕೋರ್ಸಿಗೆ ರೂ.30,000/- (ಮೂವತ್ತು ಸಾವಿರ ರೂಪಾಯಿಗಳು ಮಾತ್ರ) ಗಳು ಹಾಗೂ ಪ್ರತಿ ವರ್ಷ ಸಂಯೋಜನಾ ನವೀಕರಣ ಶುಲ್ಕವಾಗಿ ರೂ.10,000/- (ಹತ್ತು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಅಥವಾ ಈ ಬಗ್ಗೆ ಸರ್ಕಾರವು ಕಾಲಕಾಲಕ್ಕೆ ಪರಿಷ್ಕರಿಸಿ ನಿಗದಿಪಡಿಸಿದ ದರಗಳಂತೆ ಶುಲ್ಕವನ್ನು ಪ್ಯಾರಾ ಮೆಡಿಕಲ್ ಬೋರ್ಡಿಗೆ ಸಂದಾಯ ಮಾಡತಕ್ಕದ್ದು.

(2) ಸದರಿ ಸಂಸ್ಥೆಯವರು ಕೋರ್ಸನ್ನು ಪ್ರಾರಂಭಿಸುವ ಮೊದಲು ಬೋರ್ಡ್ ನಿಗದಿಪಡಿಸುವ ಬ್ಯಾಂಕ್ ಗ್ಯಾರಂಟಿಯನ್ನು ಒದಗಿಸತಕ್ಕದ್ದು.

(3) ಸದರಿ ಕೋರ್ಸಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ವರ್ಷಕ್ಕೆ ಒಂದು ಬಾರಿ ನವೆಂಬರ್ ತಿಂಗಳೊಳಗಾಗಿ ನೀಡಿ, ಜನವರಿ ಅಥವಾ ಫೆಬ್ರವರಿ ತಿಂಗಳ ಮಧ್ಯಂತರದೊಳಗೆ ಪ್ರವೇಶಪಡೆದ ವಿದ್ಯಾರ್ಥಿಗಳ ಪಟ್ಟಿಯನ್ನು, ಮೂಲ ಅಂಕಪಟ್ಟಿಗಳನ್ನು ಮತ್ತು ದೃಢೀಕರಣಗಳನ್ನು ಈ ಸಂಸ್ಥೆಯವರು ಪ್ಯಾರಾ ಮೆಡಿಕಲ್ ಬೋರ್ಡಿಗೆ ಸಲ್ಲಿಸತಕ್ಕದ್ದು.

(4) ಸದರಿ ಕೋರ್ಸಿಗೆ ಪ್ರವೇಶ ಪಡೆದ ಪ್ರತಿ ವಿದ್ಯಾರ್ಥಿಗೆ ರೂ.500.00 ರಂತೆ ನೊಂದಣಿ ಶುಲ್ಕ ಹಾಗೂ ಅವರ ವಿದ್ಯಾರ್ಹತೆಯ ಪ್ರಮಾಣ ಪತ್ರದೊಂದಿಗೆ ವಿದ್ಯಾರ್ಥಿಗಳ ಆಯ್ಕೆ ಪಟ್ಟಿಯನ್ನು ಮಂಜೂರಾತಿಗಾಗಿ ಪ್ಯಾರಾ ಮೆಡಿಕಲ್ ಬೋರ್ಡಿಗೆ ಸಲ್ಲಿಸತಕ್ಕದ್ದು.

(5) ಪ್ಯಾರಾ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆಯಲು ಕನಿಷ್ಟ ವಿದ್ಯಾರ್ಹತೆಯಾದ ಪಿ.ಯು.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರತಕ್ಕದ್ದು.

(6) ಪ್ಯಾರಾ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆದ ಪ್ರತಿ ವಿದ್ಯಾರ್ಥಿಯಿಂದ ಸರ್ಕಾರ ನಿಗದಿಪಡಿಸಿದ ಶುಲ್ಕವನ್ನು ಮಾತ್ರ ಪಡೆಯತಕ್ಕದ್ದು.

(7) ಸರ್ಕಾರ ಮಂಜೂರಾತಿ ನೀಡಿದ ಪ್ರವೇಶ ಮಿತಿಗಿಂತ ಹೆಚ್ಚಿನ ವಿದ್ಯಾರ್ಥಿಗಳಿಗೆ ಪ್ರವೇಶ ನೀಡತಕ್ಕದ್ದಲ್ಲ. ಒಂದು ವೇಳೆ ನಿಗದಿಪಡಿಸಿದ ಪ್ರವೇಶಮಿತಿಗಿಂತ ಹೆಚ್ಚಿನ ಪ್ರವೇಶ ಮಾಡಿಕೊಂಡಲ್ಲಿ ಅದರಿಂದ ಉಂಟಾಗುವ ಅನಾನುಕೂಲ / ಸಮಸ್ಯೆಗಳಿಗೆ ಸಂಸ್ಥೆಯೇ ಜವಾಬ್ದಾರಿಯಾಗಿರುತ್ತದೆ.

(8) ಸದರಿ ಸಂಸ್ಥೆಗೆ ಸರ್ಕಾರದಿಂದ ಮಂಜೂರಾದ ಸೀಟುಗಳಲ್ಲಿ ಶೇ.20 ರಷ್ಟು ಸೀಟುಗಳನ್ನು ಸರ್ಕಾರದಿಂದ ಆಯ್ಕೆ ಮಾಡಿದ ಅಭ್ಯರ್ಥಿಗಳಿಗೆ ಪ್ರವೇಶ ನೀಡಲು ಸಂಸ್ಥೆಯು ಬದ್ಧವಾಗಿರತಕ್ಕದ್ದು.

(9) ಸದರಿ ಸಂಸ್ಥೆಯು ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸಿದ ನಿಯಮಾವಳಿಯಂತೆ, ಪ್ಯಾರಾ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆಯುವ ಪ್ರತಿ ವಿದ್ಯಾರ್ಥಿಯ ವಯೋಮಿತಿ, ಪಠ್ಯಕ್ರಮ, ಕೋರ್ಸಿನ ಅವಧಿ ಹಾಗೂ ಪರೀಕ್ಷಾ ಕ್ರಮ ಮತ್ತು ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸಿದ ಇತರೆ ನಿಯಮಗಳನ್ನು ಚಾಚೂ ತಪ್ಪದೇ ಕಡ್ಡಾಯವಾಗಿ ಪಾಲಿಸತಕ್ಕದ್ದು.

(10) ಸಂಸ್ಥೆಯು ಸುಸಜ್ಜಿತ ತರಗತಿ ಕೊಠಡಿ, ಪ್ರಯೋಗಶಾಲೆ, ವಾಚನಾಲಯ, ವಿದ್ಯಾರ್ಥಿನಿಲಯ ಹಾಗೂ ಇತರೆ ಸೌಲಭ್ಯವನ್ನು ವಿದ್ಯಾರ್ಥಿಗಳಿಗೆ ಒದಗಿಸತಕ್ಕದ್ದು.

(11) ಪ್ಯಾರಾ ಮೆಡಿಕಲ್ ಬೋರ್ಡ್ ಇಚ್ಛಿಸಿದಲ್ಲಿ, ಸದರಿ ಸಂಸ್ಥೆಯು ಹೊಂದಿರುವ ಮೂಲಭೂತ ಸೌಕರ್ಯಗಳ ಬಗ್ಗೆ ವಿದ್ಯಾರ್ಥಿಗಳು ಮೊದಲ ವರ್ಷದ ಪರೀಕ್ಷೆಯನ್ನು ತೆಗೆದುಕೊಳ್ಳುವ ಪೂರ್ವದಲ್ಲಿ ಸಂಸ್ಥೆಯನ್ನು ಎರಡನೇ ಬಾರಿಗೆ ತಪಾಸಣೆ ಮಾಡತಕ್ಕದ್ದು.

(12) ಸರ್ಕಾರದಿಂದ ಯಾವುದೇ ಆರ್ಥಿಕ ಸೌಲಭ್ಯ ಅಥವಾ ಅನುದಾನವನ್ನು ಈ ಸಂಸ್ಥೆಗೆ ನೀಡಲಾಗುವುದಿಲ್ಲ.

(13) ಸಂಸ್ಥೆಯನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ನಲ್ಲಿ ನೋಂದಣಿ ಮಾಡಿಸತಕ್ಕದ್ದು ಹಾಗೂ ಪ್ಯಾರಾ ಮಡಿಕಲ್ ಬೋರ್ಡ್ ನಿಗದಿಪಡಿಸುವ ಮಾದರಿಯನ್ನು ಅನುಸರಿಸತಕ್ಕದ್ದು.

...3

(14) ಪ್ಯಾರಾ ಮೆಡಿಕಲ್ ಕೋರ್ಸಿನ ಅಂತ್ಯದಲ್ಲಿ ಪ್ಯಾರಾ ಮೆಡಿಕಲ್ ಬೋರ್ಡ್ ನಡೆಸುವ ಪರೀಕ್ಷೆಯನ್ನು ವಿದ್ಯಾರ್ಥಿಗಳು ತೆಗೆದುಕೊಂಡು, ಉತ್ತೀರ್ಣರಾಗುವ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರವನ್ನು ಪ್ಯಾರಾ ಮೆಡಿಕಲ್ ಬೋರ್ಡಿನಿಂದ ಪಡೆಯತಕ್ಕದ್ದು.

(15) ಪ್ರತಿ ತಪಾಸಣೆಗೆ ಮತ್ತು ಒಂದು ಕೋರ್ಸಿಗೆ ಸಂಸ್ಥೆಯು ರೂ.10,000/- (ಹತ್ತು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಅಥವಾ ಈ ಬಗ್ಗೆ ಸರ್ಕಾರವು ಕಾಲಕಾಲಕ್ಕೆ ಪರಿಷ್ಕರಿಸಿ ನಿಗದಿಪಡಿಸಿದ ದರಗಳಂತೆ ತಪಾಸಣಾ ಶುಲ್ಕವಾಗಿ ಪ್ಯಾರಾ ಮೆಡಿಕಲ್ ಬೋರ್ಡಿಗೆ ಪಾವತಿ ಮಾಡತಕ್ಕದ್ದು.

(16) ಸರ್ಕಾರದ ಆದೇಶ ಸಂಖ್ಯೆ: ಆಕುಕ 144 ಎಂಎಂಇ 98, ದಿನಾಂಕ 30-03-1999 ರಲ್ಲಿ ನಿರ್ದಿಷ್ಟಪಡಿಸಿರುವ ಮಾರ್ಗಸೂಚಿಗಳನ್ನು ಹಾಗೂ ಸರ್ಕಾರದ ಆದೇಶ ಸಂಖ್ಯೆ: ಆಕುಕ 328 ಎಂಎಸ್‌ಎಫ್ 07, ದಿನಾಂಕ 27-07-2007 ರಲ್ಲಿ ತಿಳಿಸಿರುವ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

(17) ಪ್ರಸ್ತುತ ವಿಧಿಸುತ್ತಿರುವ ಮೇಲ್ಕಂಡ ನಿಗದಿತ ಷರತ್ತುಗಳನ್ನು ಉಲ್ಲಂಘಿಸಿದ ಸಂದರ್ಭದಲ್ಲಿ ಅಂತಹ ಪ್ಯಾರಾ ಮೆಡಿಕಲ್ ಶಾಲೆ/ಕೋರ್ಸ್‌ನ ಮಾನ್ಯತೆಯನ್ನು ರದ್ದುಪಡಿಸಬಹುದೆಂದು ಸಂಸ್ಥೆಯು ರೂ.100/- ರ ಛಾಪಾ ಕಾಗದದಲ್ಲಿ ಮುಚ್ಚಳಿಕೆಯನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ನೀಡತಕ್ಕದ್ದು.

(18) ಪ್ರಸ್ತಾವಿತ ಶಾಲೆಯ ಕಟ್ಟಡವು ಬಾಡಿಗೆ / ಲೀಸ್ ಆದ ಪಕ್ಷದಲ್ಲಿ ಬಾಡಿಗೆ / ಲೀಸ್ ಕರಾರು ಪತ್ರವು ರೂ.100/- ರ ಛಾಪಾ ಕಾಗದದಲ್ಲಿರಬೇಕು ಮತ್ತು ಬಾಡಿಗೆ / ಲೀಸ್ ಅವಧಿಯು ಕನಿಷ್ಠ 10 ವರ್ಷಗಳಿಗಿರತಕ್ಕದ್ದು.

(19) ಪ್ಯಾರಾ ಮೆಡಿಕಲ್ ಶಾಲೆ / ಕೋರ್ಸ್ ಮಂಜೂರಾತಿ ಆದ ದಿನಾಂಕದಿಂದ 05 ವರ್ಷದೊಳಗಾಗಿ ಮಂಜೂರಾತಿ ಪಡೆದ ಸಂಸ್ಥೆಯು ಪ್ಯಾರಾ ಮೆಡಿಕಲ್ ಶಾಲೆ / ಕೋರ್ಸ್‌ನ್ನು ನಡೆಸಲು ತನ್ನದೇ ಆದ ಸ್ವಂತ ಕಟ್ಟಡವನ್ನು ಹೊಂದುವುದಾಗಿ ರೂ.100/- ರ ಛಾಪಾ ಕಾಗದದಲ್ಲಿ ಮುಚ್ಚಳಿಕೆಯನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ನೀಡತಕ್ಕದ್ದು.

(20) ಸಂಸ್ಥೆಯು ಪ್ರತಿ ವರ್ಷ ವಿದ್ಯಾರ್ಥಿಗಳ ಪ್ರವೇಶವನ್ನು ತೆಗೆದುಕೊಳ್ಳುವ ಮೊದಲು ಸಂಸ್ಥೆಯು ಪ್ರಾಂಶುಪಾಲರನ್ನು ಒಳಗೊಂಡಂತೆ ಎಲ್ಲಾ ಸಿಬ್ಬಂದಿಗಳ (ಬೋಧಕ ಮತ್ತು ಬೋಧಕೇತರ) ಸಂಪೂರ್ಣ ಮಾಹಿತಿಯನ್ನು ಬೋರ್ಡ್‌ಗೆ ನೀಡತಕ್ಕದ್ದು.

(21) ರಾಜ್ಯ ಸರ್ಕಾರ ಹಾಗೂ ಪ್ಯಾರಾ ಮೆಡಿಕಲ್ ಬೋರ್ಡ್ ಕಾಲಕಾಲಕ್ಕೆ ಹೊರಡಿಸಲಾಗುವ ಆದೇಶಗಳನ್ನು ಯಥಾವತ್ತಾಗಿ ಪಾಲಿಸತಕ್ಕದ್ದು.

(21) ಮೇಲ್ಕಂಡ ಯಾವುದೇ ಷರತ್ತುಗಳನ್ನು ಸಂಸ್ಥೆಯು ಉಲ್ಲಂಘಿಸಿದ್ದಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

08/9/11

(ವಿ. ಸಾಯಿಬಾಬಾ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
(ವೈದ್ಯಕೀಯ ಶಿಕ್ಷಣ)
22034293

08/09/11

ಇವರಿಗೆ:

1. ವೈದ್ಯಕೀಯ ಶಿಕ್ಷಣ ನಿರ್ದೇಶಕರು, ಆನಂದರಾವ್ ವೃತ್ತ, ಬೆಂಗಳೂರು-560009.
2. ಸದಸ್ಯ ಕಾರ್ಯದರ್ಶಿ, ಪ್ಯಾರಾ ಮೆಡಿಕಲ್ ಬೋರ್ಡ್, ಲಕ್ಷ್ಮಿ ಕಾಂಪ್ಲೆಕ್ಸ್, ಮೊದಲನೇ ಮಹಡಿ, ನಂ.5, ಹೊಸ ನಂ.40/20ಎ, ವಾಣಿ ವಿಲಾಸ ಆಸ್ಪತ್ರೆ ಎದುರು, ಫೋರ್ಟ್, ಬೆಂಗಳೂರು -560002.

3. ಅಧ್ಯಕ್ಷರು / ಕಾರ್ಯದರ್ಶಿ / ಪ್ರಾಂಶುಪಾಲರು, ಅಂಬಿಕ ಇನ್ಸ್ಟಿಟ್ಯೂಟ್ ಆಫ್ ಎಜುಕೇಷನ್ ಸೊಸೈಟಿ, ಟಿ.ಬೇಗೂರು ಗ್ರಾಮ, ನೆಲಮಂಗಲ ತಾಲ್ಲೂಕು, ಬೆಂಗಳೂರು-562123
4. ಸಚಿವ ಸಂಪುಟ ಶಾಖೆ, ವಿಧಾನಸೌಧ, ಬೆಂಗಳೂರು – (**ಪ್ರಕರಣ ಸಂಖ್ಯೆ:ಸಿ.331/2011**)
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

<u>ಪ್ರತಿ:</u>

1. ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ), ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ), ವಿಕಾಸ ಸೌಧ, ಬೆಂಗಳೂರು.

Govt Order - OT.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಅಂಬಿಕಾ ಇನ್ಸ್‌ಟಿಟ್ಯೂಟ್ ಅಫ್ ಎಜ್ಯುಕೇಷನ್ ಸೊಸೈಟಿ, ತ್ಯಾಮಗೊಂಡ್ಲು ಕ್ರಾಸ್ ರೋಡ್, ಟಿ. ಬೇಗೂರು ಗ್ರಾಮ, ನೆಲಮಂಗಲ ತಾಲ್ಲೂಕು, ಬೆಂಗಳೂರು ಜಿಲ್ಲೆ ಈ ಸಂಸ್ಥೆಗೆ ಹೊಸದಾಗಿ ಪ್ಯಾರ ಮೆಡಿಕಲ್ ಕೋರ್ಸ್ ಪ್ರಾರಂಭಿಸಲು ಮಂಜೂರಾತಿ ನೀಡುವ ಬಗ್ಗೆ.

**ಓದಲಾಗಿದೆ:** ಸದಸ್ಯ ಕಾರ್ಯದರ್ಶಿ, ಪ್ಯಾರ ಮೆಡಿಕಲ್ ಬೋರ್ಡ್, ಬೆಂಗಳೂರು ಇವರ ಪತ್ರ ಸಂಖ್ಯೆ: ಪಿಎಂಬಿ.92.2009-10, ದಿನಾಂಕ: 06-05-2010.

*****

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ಸದಸ್ಯ ಕಾರ್ಯದರ್ಶಿ, ಪ್ಯಾರ ಮೆಡಿಕಲ್ ಬೋರ್ಡ್, ಬೆಂಗಳೂರು ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ಅಂಬಿಕಾ ಇನ್ಸ್‌ಟಿಟ್ಯೂಟ್ ಅಫ್ ಎಜ್ಯುಕೇಷನ್ ಸೊಸೈಟಿ, ತ್ಯಾಮಗೊಂಡ್ಲು ಕ್ರಾಸ್ ರೋಡ್, ಟಿ. ಬೇಗೂರು ಗ್ರಾಮ, ನೆಲಮಂಗಲ ತಾಲ್ಲೂಕು, ಬೆಂಗಳೂರು ಜಿಲ್ಲೆ ಇವರು ಹೊಸದಾಗಿ ಡಿಪ್ಲೋಮಾ ಇನ್ ಅಪರೇಷನ್ ಥಿಯೇಟರ್ ಟೆಕ್ನಾಲಜಿ ಪ್ಯಾರ ಮೆಡಿಕಲ್ ಕೋರ್ಸನ್ನು ಪ್ರಾರಂಭಿಸಲು ಅರ್ಜಿ ಸಲ್ಲಿಸಿರುವುದಾಗಿ ತಿಳಿಸಿದ್ದಾರೆ. ಸದರಿ ಸಂಸ್ಥೆಯು ಅವಶ್ಯ ಮೂಲಭೂತ ಸೌಲಭ್ಯಗಳನ್ನು ಹೊಂದಿರುವುದಾಗಿ ತಜ್ಞರ ಸಮಿತಿಯು ವರದಿ ನೀಡಿದ್ದು, ಸದರಿ ಸಂಸ್ಥೆಗೆ ಹೊಸದಾಗಿ ಡಿಪ್ಲೋಮಾ ಇನ್ ಅಪರೇಷನ್ ಥಿಯೇಟರ್ ಟೆಕ್ನಾಲಜಿ ಪ್ಯಾರ ಮೆಡಿಕಲ್ ಕೋರ್ಸ್‌ನ್ನು 20 (ಇಪ್ಪತ್ತು) ಸೀಟುಗಳ ಪ್ರವೇಶ ಮಿತಿಯೊಂದಿಗೆ 2010-11ನೇ ಸಾಲಿಗೆ ಪ್ರಾರಂಭಿಸಲು ಅನುಮತಿ ನೀಡುವಂತೆ ಕೋರಿದ್ದಾರೆ.

ಸದಸ್ಯ ಕಾರ್ಯದರ್ಶಿ, ಪ್ಯಾರ ಮೆಡಿಕಲ್ ಬೋರ್ಡ್, ಬೆಂಗಳೂರು ಇವರ ಪ್ರಸ್ತಾವನೆಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ 2010-11ನೇ ಸಾಲಿನಿಂದ ಹೊಸದಾಗಿ ಡಿಪ್ಲೋಮಾ ಇನ್ ಅಪರೇಷನ್ ಥಿಯೇಟರ್ ಟೆಕ್ನಾಲಜಿ ಪ್ಯಾರ ಮೆಡಿಕಲ್ ಕೋರ್ಸನ್ನು 20 ಸೀಟುಗಳ ಪ್ರವೇಶ ಮಿತಿಯೊಂದಿಗೆ ಪ್ರಾರಂಭಿಸಲು ಈ ಸಂಸ್ಥೆಗೆ ಅನುಮತಿ ನೀಡಲು ತೀರ್ಮಾನಿಸಿ, ಸರ್ಕಾರವು ಈ ಆದೇಶವನ್ನು ಹೊರಡಿಸಿದೆ.

***ಸರ್ಕಾರದ ಆದೇಶ ಸಂಖ್ಯೆ: ಆಕುಕ 76 ಎಂಎಂಇ 2010, ಬೆಂಗಳೂರು, ದಿನಾಂಕ: 13/02/2012.***

ಅಂಬಿಕಾ ಇನ್ಸ್‌ಟಿಟ್ಯೂಟ್ ಅಫ್ ಎಜ್ಯುಕೇಷನ್ ಸೊಸೈಟಿ, ತ್ಯಾಮಗೊಂಡ್ಲು ಕ್ರಾಸ್ ರೋಡ್, ಟಿ. ಬೇಗೂರು ಗ್ರಾಮ, ನೆಲಮಂಗಲ ತಾಲ್ಲೂಕು, ಬೆಂಗಳೂರು ಜಿಲ್ಲೆ ಈ ಸಂಸ್ಥೆಯು ಡಿಪ್ಲೋಮಾ ಇನ್ ಅಪರೇಷನ್ ಥಿಯೇಟರ್ ಟೆಕ್ನಾಲಜಿ ಪ್ಯಾರ ಮೆಡಿಕಲ್ ಕೋರ್ಸನ್ನು 20 (ಇಪ್ಪತ್ತು) ಸೀಟುಗಳ ಪ್ರವೇಶ ಮಿತಿಯೊಂದಿಗೆ ಕೆಳಕಂಡ ಷರತ್ತು ಮತ್ತು ನಿಬಂಧನೆಗಳೊಂದಿಗೆ ಪ್ಯಾರ ಮೆಡಿಕಲ್ ಕೋರ್ಸಗಳನ್ನು 2010-11ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ಸರ್ಕಾರವು ಅನುಮತಿ ನೀಡಿದೆ.

**ಷರತ್ತು ಮತ್ತು ನಿಬಂಧನೆಗಳು:-**

1. ಸಂಸ್ಥೆಯನ್ನು ಪ್ಯಾರಮೆಡಿಕಲ್ ಬೋರ್ಡ್‌ನಲ್ಲಿ ನೋಂದಣಿ ಮಾಡಿಸತಕ್ಕದ್ದು ಹಾಗೂ ಪ್ಯಾರ ಮೆಡಿಕಲ್ ಬೋರ್ಡ್ ನಿಗದಿಪಡಿಸುವ ಮಾದರಿಯನ್ನು ಅನುಸರಿಸತಕ್ಕದ್ದು.
2. ಯಾವುದೇ ಪ್ಯಾರ ಮೆಡಿಕಲ್ ಕೋರ್ಸ್‌ಗಳನ್ನು ಪ್ರಾರಂಭ ಮಾಡುವ ಮೊದಲು ಸಂಸ್ಥೆಯು ಸಂಯೋಜನಾ ಶುಲ್ಕ ರೂಪದಲ್ಲಿ ಪ್ರತಿ ಕೋರ್ಸಿಗೆ ರೂ. 30,000/- (ಮೂವತ್ತು ಸಾವಿರ ರೂಪಾಯಿಗಳು ಮಾತ್ರ) ಹಾಗೂ ಪ್ರತಿ ವರ್ಷ ಸಂಯೋಜನಾ ನವೀಕರಣ ಶುಲ್ಕವಾಗಿ ರೂ. 10,000/- (ಹತ್ತು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಪ್ಯಾರ ಮೆಡಿಕಲ್ ಬೋರ್ಡಿಗೆ ಸಂದಾಯ ಮಾಡತಕ್ಕದ್ದು.

3. ಸಂಸ್ಥೆಯವರು ಕೋರ್ಸ್‌ನ್ನು ಪ್ರಾರಂಭಿಸುವ ಮೊದಲು ಪ್ಯಾರ ಮೆಡಿಕಲ್ ಬೋರ್ಡ್ ನಿಗಧಿಪಡಿಸುವ ಬ್ಯಾಂಕ್ ಗ್ಯಾರಂಟಿಯನ್ನು ಒದಗಿಸತಕ್ಕದ್ದು.
4. ಸದರಿ ಕೋರ್ಸ್‌ಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಒಂದು ಬಾರಿ ನವೆಂಬರ್ ತಿಂಗಳೊಳಗೆ ತೆಗೆದುಕೊಂಡು ಜನವರಿ ಅಥವಾ ಫೆಬ್ರವರಿ ತಿಂಗಳ ಮಧ್ಯಾಂತರದೊಳಗೆ ವಿದ್ಯಾರ್ಥಿಗಳ ಪಟ್ಟಿಯನ್ನು ಮೂಲ ಅಂಕಪಟ್ಟಿ ಮತ್ತು ದೃಢೀಕರಣಗಳನ್ನು ಪ್ಯಾರ ಮೆಡಿಕಲ್ ಬೋರ್ಡ್‌ಗೆ ಸಲ್ಲಿಸತಕ್ಕದ್ದು.
5. ಸದರಿ ಕೋರ್ಸ್‌ಗಳಿಗೆ ಪ್ರವೇಶ ಪಡೆದ ಪ್ರತಿ ವಿದ್ಯಾರ್ಥಿಗೆ ರೂ. 500/- ಗಳ ನೊಂದಣಿ ಶುಲ್ಕದೊಂದಿಗೆ ವಿದ್ಯಾರ್ಥಿಗಳ ಆಯ್ಕೆ ಪಟ್ಟಿಯನ್ನು ಅವರ ವಿದ್ಯಾರ್ಹತೆಯ ಪ್ರಮಾಣ ಪತ್ರದೊಂದಿಗೆ ಮಂಜೂರಾತಿಗಾಗಿ ಪ್ಯಾರ ಮೆಡಿಕಲ್ ಬೋರ್ಡ್‌ಗೆ ಸಲ್ಲಿಸತಕ್ಕದ್ದು.
6. ಪ್ಯಾರ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆಯಲು ಕನಿಷ್ಠ ಪಿ.ಯು.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರಬೇಕು.
7. ಪ್ಯಾರ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆದ ಪ್ರತಿ ವಿದ್ಯಾರ್ಥಿಯಿಂದ ಸರ್ಕಾರ ನಿಗಧಿಪಡಿಸಿದ ಶುಲ್ಕವನ್ನು ಮಾತ್ರ ಪಡೆಯತಕ್ಕದ್ದು.
8. ಸರ್ಕಾರ ಮಂಜೂರಾತಿ ನೀಡಿದ ಪ್ರವೇಶ ಮಿತಿಗಿಂತ ಹೆಚ್ಚಿನ ವಿದ್ಯಾರ್ಥಿಗಳಿಗೆ ಪ್ರವೇಶ ನೀಡತಕ್ಕದ್ದಲ್ಲ. ಒಂದು ವೇಳೆ ನಿಗಧಿಪಡಿಸಿದ ಪ್ರವೇಶ ಮಿತಿಗಿಂತ ಹೆಚ್ಚಿನ ಪ್ರವೇಶ ಮಾಡಿಕೊಂಡಲ್ಲಿ ಅದರಿಂದ ಉಂಟಾಗುವ ಅನಾನುಕೂಲ/ಸಮಸ್ಯೆಗಳಿಗೆ ಸಂಸ್ಥೆಯೇ ಜವಾಬ್ದಾರಿಯಾಗಿರುತ್ತದೆ.
9. ಸಂಸ್ಥೆಗೆ ಮಂಜೂರಾತಿ ನೀಡಿದ ಸೀಟುಗಳಲ್ಲಿ ಶೇ. 20 ಸೀಟುಗಳನ್ನು ಸರ್ಕಾರದಿಂದ ಆಯ್ಕೆ ಮಾಡಿದ ಅಭ್ಯರ್ಥಿಗಳಿಂದ ತುಂಬಲು ಸಂಸ್ಥೆಯು ಬದ್ಧವಾಗಿರತಕ್ಕದ್ದು.
10. ಪ್ಯಾರ ಮೆಡಿಕಲ್ ಬೋರ್ಡ್ ನಿಗಧಿಪಡಿಸಿದ ನಿಯಮಾವಳಿಗಳಂತೆ, ಪ್ಯಾರ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆಯುವ ಪ್ರತಿ ವಿಧ್ಯಾರ್ಥಿಯ ವಯೋಮಿತಿ, ಪಠ್ಯಕ್ರಮ, ಕೋರ್ಸಿನ ಅವಧಿ ಹಾಗೂ ಪರೀಕ್ಷಾ ಕ್ರಮ ಮತ್ತು ಪ್ಯಾರ ಮೆಡಿಕಲ್ ಬೋರ್ಡ್ ನಿಗಧಿಪಡಿಸಿದ ಇತರೆ ನಿಯಮಗಳನ್ನು ಸಂಸ್ಥೆಯು ಚಾಚೂ ತಪ್ಪದೇ ಕಡ್ಡಾಯವಾಗಿ ಪಾಲಿಸತಕ್ಕದ್ದು,
11. ಸದರಿ ಸಂಸ್ಥೆಯು ಸುಸಜ್ಜಿತ ತರಗತಿ ಕೊಠಡಿ, ಪ್ರಯೋಗಶಾಲೆ, ವಾಚನಾಲಯ, ವಿದ್ಯಾರ್ಥಿನಿಲಯ ಹಾಗೂ ಇತರೆ ಸೌಲಭ್ಯಗಳನ್ನು ವಿದ್ಯಾರ್ಥಿಗಳಿಗೆ ಒದಗಿಸತಕ್ಕದ್ದು.
12. ಸದರಿ ಸಂಸ್ಥೆಯು ಹೊಂದಿರುವ ಮೂಲಭೂತ ಸೌಕರ್ಯಗಳ ಬಗ್ಗೆ ಮೊದಲ ವರ್ಷದ ಪರೀಕ್ಷೆಯನ್ನು ತೆಗೆದುಕೊಳ್ಳುವ ಪೂರ್ವದಲ್ಲಿ ವಿದ್ಯಾರ್ಥಿಗಳು ಇಚ್ಛಿಸಿದಲ್ಲಿ ಪ್ಯಾರ ಮೆಡಿಕಲ್ ಬೋರ್ಡ್ ಎರಡನೇ ಬಾರಿಗೆ ಸಂಸ್ಥೆಯನ್ನು ತಪಾಸಣೆ ಮಾಡತಕ್ಕದ್ದು.
13. ಸರ್ಕಾರದಿಂದ ಯಾವುದೇ ಆರ್ಥಿಕ ಸೌಲಭ್ಯ ಅಥವಾ ಅನುದಾನವನ್ನು ಸಂಸ್ಥೆಗೆ ನೀಡಲಾಗುವುದಿಲ್ಲ.
14. ಪ್ಯಾರ ಮೆಡಿಕಲ್ ಕೋರ್ಸಿನ ಅಂತ್ಯದಲ್ಲಿ ಪ್ಯಾರ ಮೆಡಿಕಲ್ ಬೋರ್ಡ್ ನಡೆಸುವ ಪರೀಕ್ಷೆಯನ್ನು ವಿದ್ಯಾರ್ಥಿಗಳು ತೆಗೆದುಕೊಂಡು ಉತ್ತೀರ್ಣರಾಗುವ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರವನ್ನು ಪ್ಯಾರ ಮೆಡಿಕಲ್ ಬೋರ್ಡ್‌ನಿಂದ ಪಡೆಯತಕ್ಕದ್ದು.
15. ಪ್ರತಿ ಕೋರ್ಸಿಗೆ ರೂ. 10,000/- (ಹತ್ತು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಪ್ರತಿ ತಪಾಸಣೆಗೆ ತಪಾಸನಾ ಶುಲ್ಕವಾಗಿ ಪ್ಯಾರ ಮೆಡಿಕಲ್ ಬೋರ್ಡ್‌ಗೆ ಪಾವತಿ ಮಾಡತಕ್ಕದ್ದು.
16. ಸರ್ಕಾರದ ಆದೇಶ ಸಂಖ್ಯೆ: ಆಕುಕ 144 ಎಂಎಂಇ 98, ದಿನಾಂಕ: 30-03-1999ರಲ್ಲಿ ನಿರ್ದಿಷ್ಟಪಡಿಸಿರುವ ಮಾರ್ಗಸೂಚಿಗಳನ್ನು ಹಾಗೂ ಸರ್ಕಾರದ ಆದೇಶ ಸಂಖ್ಯೆ: ಆಕುಕ 328 ಎಂಎಸ್‌ಎಫ್ 2007, ದಿನಾಂಕ: 27-07-2007ರಲ್ಲಿನ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
17. ಪ್ರಸ್ತಾವಿತ ಸಂಸ್ಥೆಯ ಕಟ್ಟಡವು ಬಾಡಿಗೆ/ಲೀಸ್ ಅದ ಪಕ್ಷದಲ್ಲಿ ಬಾಡಿಗೆ/ಲೀಸ್ ಕರಾರು ಪತ್ರವು ರೂ. 100/- ಛಾಪಾ ಕಾಗದದಲ್ಲಿರಬೇಕು ಮತ್ತು ಬಾಡಿಗೆ/ಲೀಸ್ ಅವಧಿಯು ಕನಿಷ್ಠ 10 ವರ್ಷಗಳಿಗಿರಬೇಕು.

18. ಪ್ಯಾರ ಮೆಡಿಕಲ್ ಶಾಲೆ/ಕೋರ್ಸ್ ಮಂಜೂರಾತಿ ಆದ ದಿನಾಂಕದಿಂದ 5 ವರ್ಷದೊಳಗಾಗಿ ಮಂಜೂರಾತಿ ಪಡೆದ ಸಂಸ್ಥೆಯು ಪ್ಯಾರ ಮೆಡಿಕಲ್ ಶಾಲೆ/ಕೋರ್ಸ್‌ನ್ನು ನಡೆಸಲು ತನ್ನದೆ ಆದ ಸ್ವಂತ ಕಟ್ಟಡವನ್ನು ಹೊಂದುವುದಾಗಿ ರೂ. 100/- ಛಾಪಾ ಕಾಗದದಲ್ಲಿ ಮುಚ್ಚಳಿಕೆಯನ್ನು ನೀಡತಕ್ಕದ್ದು.
19. ಸಂಸ್ಥೆಯು ಪ್ರತಿ ವರ್ಷ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡುವ ಮೊದಲು ಸಂಸ್ಥೆಯು ಪ್ರಾಂಶುಪಾಲರನ್ನು ಒಳಗೊಂಡಂತೆ ಎಲ್ಲಾ ಸಿಬ್ಬಂದಿಗಳ (ಬೋಧಕ ಮತ್ತು ಬೋಧಕೇತರ) ಸಂಪೂರ್ಣ ಮಾಹಿತಿಯನ್ನು ನೀಡತಕ್ಕದ್ದು.
20. ಪ್ರಸ್ತುತ ವಿಧಿಸಿರುವ ಮೇಲ್ಕಂಡ ನಿಗಧಿತ ಷರತ್ತುಗಳನ್ನು ಉಲ್ಲಂಘಿಸಿದ ಸಂದರ್ಭದಲ್ಲಿ ಅಂತಹ ಪ್ಯಾರ ಮೆಡಿಕಲ್ ಶಾಲೆ/ಕೋರ್ಸ್‌ನ ಮಾನ್ಯತೆ ರದ್ದುಪಡಿಸಬಹುದೆಂದು ಸಂಸ್ಥೆಯು ರೂ. 100/- ರ ಛಾಪಾ ಕಾಗದದಲ್ಲಿ ಮುಚ್ಚಳಿಕೆಯನ್ನು ನೀಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

13/2/12

(ಎ.ಕೆ. ಬೈರಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
(ವೈದ್ಯಕೀಯ ಶಿಕ್ಷಣ)

<u>ಇವರಿಗೆ:</u>

1. ವೈದ್ಯಕೀಯ ಶಿಕ್ಷಣ ನಿರ್ದೇಶಕರು, ಅನಂದರಾವ್ ವೃತ್ತ, ಬೆಂಗಳೂರು-09.
2. ಸದಸ್ಯ ಕಾರ್ಯದರ್ಶಿ, ಪ್ಯಾರ ಮೆಡಿಕಲ್ ಬೋರ್ಡ್. ನಂ. 5 ಹೊಸ ನಂ. 40/20ಎ, 1ನೇ ಮಹಡಿ, ಲಕ್ಷ್ಮೀ ಕಾಂಪ್ಲೆಕ್ಸ್, ವಾಣಿವಿಲಾಸ ಅಸ್ಪತ್ರೆ ಎದುರು, ಕೋಟೆ, ಬೆಂಗಳೂರು-02.
3. ಅಧ್ಯಕ್ಷರು, ಅಂಬಿಕಾ ಇನ್‌ಸ್ಟಿಟ್ಯೂಟ್ ಅಫ್ ಎಜ್ಯುಕೇಷನ್ ಸೊಸೈಟಿ, ತ್ಯಾಮಗೊಂಡ್ಲು ಕ್ರಾಸ್ ರೋಡ್, ಟಿ. ಬೇಗೂರು ಗ್ರಾಮ, ನೆಲಮಂಗಲ ತಾಲ್ಲೂಕು, ಬೆಂಗಳೂರು ಜಿಲ್ಲೆ
4. ಮಾನ್ಯ ವೈದ್ಯಕೀಯ ಶಿಕ್ಷಣಾ ಸಚಿವರ ಅಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ. (ವೈದ್ಯಕೀಯ ಶಿಕ್ಷಣ)
6. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ. (ವೈದ್ಯಕೀಯ ಶಿಕ್ಷಣ)
7. ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು.